ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ
ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**
ಅಂತರ್ಜಾಲ : https://kptcl.karnataka.gov.in
ದೂರವಾಣಿ ಸಂಖ್ಯೆ : 080-22212343
ಇ–ಮೇಲ್ ವಿಳಾಸ : director.ahr.kptcl@gmail.com

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ: 29.06.2011.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ: 10.04.2018
3. ಸರ್ಕಾರದ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021 ದಿನಾಂಕ: 21.06.2021.
4. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ: 05.07.2021.
5. ಸರ್ಕಾರದ ಆದೇಶ ಸಂಖ್ಯೆ: ಆಇ3(ಇ) ಸೇನಿಸೇ 2023 ದಿನಾಂಕ: 09.06.2023.

**ಪೀಠಿಕೆ:**

ಸರ್ಕಾರದ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021 ದಿನಾಂಕ: 21.06.2021 ನ್ನು ನಿಗಮವು ಅಳವಡಿಸಿಕೊಂಡು, ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ: 05.07.2021 ರಲ್ಲಿ ನಿಗಮದ ಮಹಿಳಾ ನೌಕರರಿಗೆ ಕೆಲವು ಷರತ್ತುಗಳ ಮೇರೆಗೆ ಇಡೀ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗಿರುತ್ತದೆ.

ಪ್ರಸ್ತುತ ಸರ್ಕಾರವು, ಒಂಟಿ ಪೋಷಕರಾಗಿರುವ (Single male parent) ಅವಿವಾಹಿತ/ವಿವಾಹ-ವಿಚ್ಛೇದಿತ/ವಿಧುರ ಪುರುಷ ರಾಜ್ಯ ಸರ್ಕಾರಿ ನೌಕರರಿಗೂ ಮಕ್ಕಳ ಆರೈಕೆಗಾಗಿ ಶಿಶುಪಾಲನಾ ರಜೆಯ ಅವಶ್ಯಕತೆ ಇರುತ್ತದೆಂದು, ಮೂಲತಃ ಶಿಶುಪಾಲನಾ ರಜೆಯ ಸೌಲಭ್ಯವನ್ನು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಮಾತ್ರ ವಿಸ್ತರಿಸಿದ್ದಾಗ್ಯೂ ಏಕಪೋಷಕರಾಗಿರುವ ಪುರುಷ ಸರ್ಕಾರಿ ನೌಕರರಿಗೂ ಈ ಸೌಲಭ್ಯವನ್ನು ವಿಸ್ತರಿಸುವುದು ನ್ಯಾಯಸಮ್ಮತವಾಗುವುದನ್ನು ಪರಿಗಣಿಸಿ, ಶಿಶುಪಾಲನಾ ರಜೆಯ ಸೌಲಭ್ಯವನ್ನು ಕೆಲವು ಷರತ್ತುಗಳಿಗೊಳಪಟ್ಟು ಒಂಟಿ ಪೋಷಕರಾಗಿರುವ (Single male parent) ಅವಿವಾಹಿತ/ವಿವಾಹ-ವಿಚ್ಛೇದಿತ/ವಿಧುರ ಸರ್ಕಾರಿ ಪುರುಷ ನೌಕರರಿಗೂ ಸಹ ಉಲ್ಲೇಖ-5 ರ ಸರ್ಕಾರದ ಆದೇಶದಲ್ಲಿ ವಿಸ್ತರಿಸಲಾಗಿರುತ್ತದೆ.

ರಾಜ್ಯ ಸರ್ಕಾರದ ದಿನಾಂಕ: 09.06.2023 ರ ಆದೇಶವನ್ನು ನಿಗಮದಲ್ಲಿ ಅಳವಡಿಸಿಕೊಂಡು ಈ ಕೆಳಕಂಡಂತೆ ಆದೇಶಿಸಲಾಗಿದೆ:-

**ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411(ಬಿ)/96-97,**
**ಬೆಂಗಳೂರು, ದಿನಾಂಕ:** 13 MAY 2024

ನಿಗಮದ ಒಂಟಿ ಪೋಷಕರಾಗಿರುವ (Single male parent) ಅವಿವಾಹಿತ/ವಿವಾಹ ವಿಚ್ಛೇದಿತ/ವಿಧುರ ಪುರುಷ ನೌಕರರಿಗೂ ಅವರ ಇಡೀ ಸೇವಾ ಅವಧಿಯಲ್ಲಿ ಗರಿಷ್ಠ 6 ತಿಂಗಳ ಅವಧಿಗೆ ಅಂದರೆ ಒಟ್ಟು 180 ದಿನಗಳಿಗೆ ಮೀರದಂತೆ ಶಿಶುಪಾಲನಾ ರಜೆಯ ಸೌಲಭ್ಯವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮಂಜೂರು ಮಾಡಿದೆ.

ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ: 05.07.2021 ರಲ್ಲಿ ವಿಧಿಸಲಾಗಿರುವ ಷರತ್ತುಗಳನ್ನು ಸಂದರ್ಭಾನುಸಾರ ಅನ್ವಯಿಸಿಕೊಂಡು ಶಿಶುಪಾಲನಾ ರಜೆಯನ್ನು ಸಕ್ಷಮ ಪ್ರಾಧಿಕಾರವು ಮಂಜೂರು ಮಾಡತಕ್ಕದ್ದು.

ಯಾವುದೇ ಸಂದರ್ಭದಲ್ಲಿ ಶಿಶುಪಾಲನಾ ರಜೆಯನ್ನು ಪಡೆದ ಅವಧಿಯಲ್ಲಿ ಸಂಬಂಧಿತ ಪುರುಷ ನೌಕರರು ವಿವಾಹ ಮಾಡಿಕೊಂಡಲ್ಲಿ ಆ ದಿನಾಂಕದಿಂದ ಶಿಶುಪಾಲನಾ ರಜೆಯು ತಾನಾಗಿಯೇ ರದ್ದುಗೊಳ್ಳುತ್ತದೆ.

ಈ ಬಗ್ಗೆ ಕವಿಪ್ರನಿನಿ ನೌಕರರ ಸೇವಾ ನಿಯಮಾವಳಿಗಳಿಗೆ ಸೂಕ್ತ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ/ಹಣಕಾಸು), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂ.ಸಂ: 659), ಬೆಂಗಳೂರು.
2. ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋಂ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.